All India Radio: Bangalore
National Bulletin In Kannada
21.02.2025 7.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
***************

ಮುಖ್ಯಾಂಶಗಳು

- ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಂದ ದೆಹಲಿಯಲ್ಲಿಂದು ಸೋಲ್ ನಾಯಕತ್ವ ಶೃಂಗಸಭೆಯ ಮೊದಲ ಆವೃತ್ತಿ ಉದ್ಘಾಟನೆ
- ಸಂಘರ್ಷಗಳ ಯುಗದಲ್ಲಿ ಸುಸ್ಥಿರ ಅಭಿವೃದ್ಧಿ ಗುರಿ ಸಾಧನೆ ಸವಾಲಿನ ಕೆಲಸ - ಸಚಿವ ಪಿಯೂಶ್ ಗೋಯಲ್
- ಆಯುಷ್ಮಾನ್ ಭಾರತ್ ಆರೋಗ್ಯ ವಿಮಾ ಯೋಜನೆ ಜಾರಿಗೆ ದೆಹಲಿ ಸರ್ಕಾರ ನಿರ್ಧಾರ
- ಜಾಗತಿಕವಾಗಿ ಭೌಗೋಳಿಕ ರಾಜಕೀಯ ಸ್ಥಿತಿಗತಿ ಸಂಕಷ್ಟದಲ್ಲಿ - ಡಾ.ಎಸ್.ಜೈಶಂಕರ್
- ಐಸಿಸಿ ಚಾಂಪಿಯನ್ಸ್ ಟ್ರೋಫಿ; ಬಾಂಗ್ಲಾದೇಶದ ವಿರುದ್ಧ ಭಾರತಕ್ಕೆ ೬ ವಿಕೆಟ್‌ಗಳ ಭರ್ಜರಿ ಗೆಲುವು

***************

ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ನವದೆಹಲಿಯಲ್ಲಿ ಭಾರತ ಮಂಟಪದಲ್ಲಿಂದು ಸೋಲ್ ನಾಯಕತ್ವ ಶೃಂಗಸಭೆಯ ಮೊದಲ ಆವೃತ್ತಿಯನ್ನು ಉದ್ಘಾಟಿಸಲಿದ್ದಾರೆ. ಭೂತಾನಿನ ಪ್ರಧಾನಿ ದಾಶೋ ಶೆರಿಂಗ್ ಟೊಬ್ಗೇ ಅವರು ಗೌರವಾನ್ವಿತ ಅತಿಥಿಯಾಗಿ ಮುಖ್ಯ ಭಾಷಣ ಮಾಡಲಿದ್ದಾರೆ. ಎರಡು ದಿನಗಳ ಸೋಲ್ ನಾಯಕತ್ವ ಶೃಂಗಸಭೆ ಒಂದು ಪ್ರಮುಖ ವೇದಿಕೆಯಾಗಿ ಕಾರ್ಯನಿರ್ವಹಿಸುತ್ತದೆ. ಅಲ್ಲಿ ರಾಜಕೀಯ, ಕ್ರೀಡೆ, ಕಲೆ ಮತ್ತು ಮಾಧ್ಯಮ, ಆಧ್ಯಾತ್ಮಿಕ ಜಗತ್ತು, ಸಾರ್ವಜನಿಕ ನೀತಿ, ವ್ಯವಹಾರ ಮತ್ತು ಸಾಮಾಜಿಕ ವಲಯದಂತಹ ವೈವಿಧ್ಯಮಯ ಕ್ಷೇತ್ರಗಳ ನಾಯಕರು ತಮ್ಮ ಸ್ಫೂರ್ತಿದಾಯಕ ಜೀವನ ಪಯಣದ ಅನುಭವಗಳನ್ನು ಹಂಚಿಕೊಳ್ಳಲಿದ್ದಾರೆ.

ಧ್ವನಿ: ಸುಪರ್ಣ

***************

ವಿಶ್ವಾದ್ಯಂತ ವಿವಿಧ ದೇಶಗಳ ನಡುವೆ ಸಂಘರ್ಷಗಳಿರುವ ಯುಗದಲ್ಲಿ ಸುಸ್ಥಿರ ಅಭಿವೃದ್ಧಿ ಗುರಿಗಳನ್ನು ಸಾಧಿಸುವುದು ಸವಾಲಿನ ಕೆಲಸವಾಗಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ.

ಪುಣೆಯಲ್ಲಿ ನಿನ್ನೆ ವಿದೇಶಾಂಗ ಸಚಿವಾಲಯ ಮತ್ತು ಪುಣೆ ಅಂತಾರಾಷ್ಟ್ರೀಯ ಕೇಂದ್ರವು ಜಂಟಿಯಾಗಿ ಆಯೋಜಿಸಿದ್ದ ಆರನೇ ವಾರ್ಷಿಕ ಏಷ್ಯಾ ಆರ್ಥಿಕ ಸಂವಾದದ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಇಂಧನ, ನೀರು ಮತ್ತು ರಸ್ತೆಗಳಂತಹ ಅಗತ್ಯ ಮೂಲಸೌಕರ್ಯಗಳ ಲಭ್ಯತೆಯಿಲ್ಲದೆ, ಅಭಿವೃದ್ಧಿ ಸಾಧಿಸಲಾಗದ ಗುರಿಯಾಗಿ ಉಳಿದಿದೆ. ಕಳೆದ  ಹನ್ನೊಂದು ವರ್ಷಗಳಲ್ಲಿ ಈ ಮೂಲಭೂತ ಸೌಲಭ್ಯಗಳನ್ನು ಸುಧಾರಿಸುವಲ್ಲಿ ಸರ್ಕಾರ ಗಮನಾರ್ಹ ಪ್ರಗತಿ ಸಾಧಿಸಿದೆ ಎಂದು ಅವರು ಎತ್ತಿ ತೋರಿಸಿದರು. ಮೂರು ದಿನಗಳ ಸಮ್ಮೇಳನದಲ್ಲಿ ಆಸ್ಟ್ರೇಲಿಯಾ, ಈಜಿಪ್ಟ್, ಇಂಡೋನೇಷ್ಯಾ, ಜಪಾನ್, ನೇಪಾಳ, ನೆದರ್ ಲ್ಯಾಂಡ್ಸ್, ಸಿಂಗಾಪುರ, ದಕ್ಷಿಣ ಆಫ್ರಿಕಾ ಮತ್ತು ಶ್ರೀಲಂಕಾ ರಾಷ್ಟ್ರಗಳ ಪ್ರತಿನಿಧಿಗಳು ಭಾಗವಹಿಸಿದ್ದಾರೆ.

***************

ದೆಹಲಿ ಸರ್ಕಾರ ಆಯುಷ್ಮಾನ್ ಭಾರತ್ ಆರೋಗ್ಯ ವಿಮಾ ಯೋಜನೆ ಜಾರಿಗೊಳಿಸಲು ನಿರ್ಧರಿಸಿದೆ. ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಅವರು ನಿನ್ನೆ ಸಂಜೆ ಪ್ರಮಾಣವಚನ ಸ್ವೀಕರಿಸಿದ ಬಳಿಕ ನಡೆದ ದೆಹಲಿ ಸರ್ಕಾರದ ಮೊದಲ ಸಚಿವ ಸಂಪುಟ ಸಭೆಯ ಅಧ್ಯಕ್ಷತೆ ವಹಿಸಿದ ನಂತರ ಮಾಧ್ಯಮಗಳಿಗೆ ಈ ವಿಷಯ ತಿಳಿಸಿದರು. ಆಯುಷ್ಮಾನ್ ಭಾರತ್ ಯೋಜನೆ ಮತ್ತು ದೆಹಲಿ ಸರ್ಕಾರದಿಂದ ೫ ಲಕ್ಷ ರೂಪಾಯಿಗಳ ಮರುಪೂರಣವನ್ನು ಸರ್ವಾನುಮತದಿಂದ ಅನುಮೋದಿಸಲಾಗಿದೆ ಮತ್ತು ಅದನ್ನು ಆದಷ್ಟು ಬೇಗ ಜಾರಿಗೆ ತರಲಾಗುವುದು ಎಂದು ಅವರು ಹೇಳಿದರು. ವಿಧಾನಸಭೆಯ ಮೊದಲ ಅಧಿವೇಶನದಲ್ಲಿ ೧೪ ಸಿಎಜಿ ವರದಿಗಳನ್ನು ಮಂಡಿಸಲಾಗುವುದು ಎಂದು ಅವರು ಹೇಳಿದರು.

ಧ್ವನಿ: ಮುಖ್ಯಮಂತ್ರಿ ರೇಖಾ ಗುಪ್ತಾ

ದೆಹಲಿ ಮುಖ್ಯಮಂತ್ರಿ ಸಾಮಾನ್ಯ ಆಡಳಿತ, ಸೇವೆಗಳು, ಹಣಕಾಸು, ಕಂದಾಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಭೂಮಿ ಮತ್ತು ಕಟ್ಟಡ, ಮಾಹಿತಿ ಮತ್ತು ಸಾರ್ವಜನಿಕ ಸಂಪರ್ಕ, ಜಾಗೃತ, ಆಡಳಿತ ಸುಧಾರಣೆಗಳು, ಯೋಜನೆ ಖಾತೆಗಳನ್ನು ಹೊಂದಿದ್ದಾರೆ. ಉಳಿದಂತೆ ಆಶಿಶ್ ಸೂದ್ ಗೃಹ, ವಿದ್ಯುತ್, ನಗರಾಭಿವೃದ್ಧಿ, ಶಿಕ್ಷಣ ಮತ್ತು ಉನ್ನತ ಶಿಕ್ಷಣ ಮತ್ತು ತರಬೇತಿ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಗಳ ಉಸ್ತುವಾರಿ ವಹಿಸಲಿದ್ದಾರೆ. ಪರ್ವೇಶ್ ವರ್ಮಾ ಗೆ ಲೋಕೋಪಯೋಗಿ ಇಲಾಖೆ, ಶಾಸಕಾಂಗ ವ್ಯವಹಾರಗಳು, ನೀರಾವರಿ ಮತ್ತು ಪ್ರವಾಹ ನಿಯಂತ್ರಣ, ನೀರು ಮತ್ತು ಗುರುದ್ವಾರ ಚುನಾವಣೆಗಳ ಉಸ್ತುವಾರಿ ನೀಡಲಾಗಿದೆ.

ಸರ್ದಾರ್ ಮಂಜಿಂದರ್ ಸಿಂಗ್ ಸಿರ್ಸಾ ಗೆ ಆಹಾರ ಮತ್ತು ಸರಬರಾಜು, ಅರಣ್ಯ ಮತ್ತು ಪರಿಸರ ಮತ್ತು ಕೈಗಾರಿಕೆಗಳ ಉಸ್ತುವಾರಿ ವಹಿಸಲಾಗಿದ್ದು, ಡಾ. ಪಂಕಜ್ ಕುಮಾರ್ ಸಿಂಗ್‌ಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಸಾರಿಗೆ ಮತ್ತು ಮಾಹಿತಿ ತಂತ್ರಜ್ಞಾನದ ಉಸ್ತುವಾರಿ ನೀಡಲಾಗಿದೆ. ಕಪಿಲ್ ಮಿಶ್ರಾ ಅವರಿಗೆ ಕಾನೂನು ಮತ್ತು ನ್ಯಾಯ, ಕಾರ್ಮಿಕ ಇಲಾಖೆ, ಉದ್ಯೋಗ, ಅಭಿವೃದ್ಧಿ, ಕಲೆ ಮತ್ತು ಸಂಸ್ಕೃತಿ, ಭಾಷೆ ಮತ್ತು ಪ್ರವಾಸೋದ್ಯಮ ಇಲಾಖೆಯ ಉಸ್ತುವಾರಿ ನೀಡಲಾಗಿದೆ.

***************

ಪ್ರಧಾನಿ ನರೇಂದ್ರ ಮೋದಿ ಅವರು ನವದೆಹಲಿಯಲ್ಲಿಂದು ೯೮ನೇ ಅಖಿಲ ಭಾರತೀಯ ಮರಾಠಿ ಸಾಹಿತ್ಯ ಸಮ್ಮೇಳನವನ್ನು ಉದ್ಘಾಟಿಸಲಿದ್ದಾರೆ. ಮರಾಠಿ ಭಾಷೆಗೆ ಕೇಂದ್ರ ಸರ್ಕಾರ ಇತ್ತೀಚೆಗೆ ಶಾಸ್ತ್ರೀಯ ಭಾಷಾ ಸ್ಥಾನಮಾನವನ್ನು ನೀಡಿತು. ಮೂರು ದಿನಗಳ ಸಮ್ಮೇಳನವು ವೈವಿಧ್ಯಮಯ ಚರ್ಚೆಗಳು, ಪುಸ್ತಕ ಪ್ರದರ್ಶನಗಳು, ಸಾಂಸ್ಕೃತಿಕ ಪ್ರದರ್ಶನ ಮತ್ತು ಹೆಸರಾಂತ ಸಾಹಿತಿಗಳೊಂದಿಗೆ ಸಂವಾದಾತ್ಮಕ ಗೋಷ್ಠಿಗಳನ್ನು ಒಳಗೊಂಡಿದೆ.

ಇದು ಮರಾಠಿ ಸಾಹಿತ್ಯದ ಕಾಲಾತೀತ ಪ್ರಸ್ತುತತೆಯನ್ನು ಆಚರಿಸುತ್ತದೆ ಮತ್ತು ಭಾಷಾ ಸಂರಕ್ಷಣೆ, ಅನುವಾದ ಮತ್ತು ಸಾಹಿತ್ಯ ಕೃತಿಗಳ ಮೇಲೆ ಡಿಜಿಟಲೀಕರಣದ ಪ್ರಭಾವ ಸೇರಿದಂತೆ ಸಮಕಾಲೀನ ಪ್ರವಚನದಲ್ಲಿ ಅದರ ಪಾತ್ರವನ್ನು ಅನ್ವೇಷಿಸುತ್ತದೆ.

೭೧ ವರ್ಷಗಳ ನಂತರ ರಾಷ್ಟ್ರ ರಾಜಧಾನಿಯಲ್ಲಿ ನಡೆಯುತ್ತಿರುವ ಮರಾಠಿ ಸಾಹಿತ್ಯ ಸಭೆಯು ಪುಣೆಯಿಂದ ದೆಹಲಿಗೆ ಸಾಂಕೇತಿಕ ಸಾಹಿತ್ಯ ರೈಲು ಪ್ರಯಾಣ ಸಹ ಒಳಗೊಂಡಿದೆ.

***************

ಜಾಗತಿಕ ಭೌಗೋಳಿಕ ರಾಜಕೀಯ ಸ್ಥಿತಿಗತಿ ಸಂಕಷ್ಟದಲ್ಲಿ ಮುಂದುವರೆದಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಹೇಳಿದ್ದಾರೆ.

ಅವರು ದಕ್ಷಿಣ ಆಫ್ರಿಕಾ ಜೊಹಾನ್ಸ್‌ಬರ್ಗ್‌ನಲ್ಲಿ ನಿನ್ನೆ ಜಿ೨೦ ವಿದೇಶಾಂಗ ಸಚಿವ ಸಭೆಯನ್ನುದ್ದೇಶಿಸಿ ಮಾತನಾಡಿ, ಪೂರೈಕೆ ಸರಣಿ, ವ್ಯಾಪಾರ ಮತ್ತು ಹಣಕಾಸು ಹಾಗೂ ಪಾರದರ್ಶಕ ರೀತಿಯಲ್ಲಿ ದತ್ತಾಂಶ ಹರಿವು ಕುರಿತು ಆತಂಕ ವ್ಯಕ್ತಪಡಿಸಿದರು.

ಕೃತಕ ಬುದ್ಧಿಮತ್ತೆ ಮತ್ತು ವಿದ್ಯುನ್ಮಾನ ವಾಹನಗಳ ವಲಯದಲ್ಲಿ ಸಾಕಷ್ಟು ಪ್ರಗತಿಯಾಗುತ್ತಿದೆ. ಅಂತೆಯೇ ಬಾಹ್ಯಾಕಾಶ, ಡ್ರೋಣ್ ಮತ್ತು ಹಸಿರು ಹೈಡ್ರೋಜನ್ ವಲಯಗಳಲ್ಲೂ ಸಾಕಷ್ಟು ಪ್ರಗತಿಯಾಗುವ ಜೊತೆಗೆ ಭೌಗೋಳಿಕ ರಾಜಕೀಯ ಪರಿಣಾಮಗಳು ಉಂಟಾಗುತ್ತಿವೆ. ಜಾಗತಿಕ ಕೊರತೆಗಳನ್ನು ನೀಗಿಸಲು ಬಹುಪಕ್ಷೀಯತೆ ಅತ್ಯಂತ ಅಗತ್ಯವಾಗಿದೆ ಎಂದು ತಿಳಿಸಿದರು.

ಗಾಜಾದಲ್ಲಿ ಕದನ ವಿರಾಮ ಘೋಷಣೆ ಮತ್ತು ಒತ್ತೆಯಾಳುಗಳ ಬಿಡುಗಡೆಯನ್ನು ಭಾರತ ಸ್ವಾಗತಿಸುತ್ತದೆ ಎಂದು ಜೈಶಂಕರ್ ಹೇಳಿದರು.

***************

ಉತ್ತರ ಪ್ರದೇಶದಾದ್ಯಂತ ವಿವಿಧ ಜೈಲುಗಳಲ್ಲಿರುವ ಕೈದಿಗಳಿಗೆ ಇಂದು ಅವರ ಜೈಲುಗಳ ಆವರಣದಲ್ಲಿ ಪ್ರಯಾಗ್‌ರಾಜ್ ಮಹಾಕುಂಭಮೇಳದ ಪವಿತ್ರ ಸ್ನಾನ ಮಾಡಿಸಲಾಗುವುದು.

ಈ ಕುರಿತಂತೆ ಉತ್ತರ ಪ್ರದೇಶ ಸರ್ಕಾರ ನೂತನ ಉಪಕ್ರಮವನ್ನು ಪರಿಚಯಿಸಿದ್ದು, ಇದರಡಿಯಲ್ಲಿ ಪ್ರಯಾಗ್‌ರಾಜ್‌ನ ತ್ರಿವೇಣಿ ಸಂಗಮದಿಂದ ಪವಿತ್ರ ನೀರನ್ನು ಜೈಲು ಸಂಕೀರ್ಣಕ್ಕೆ ಕೊಡಗಳಲ್ಲಿ ತಂದು, ಅಲ್ಲಿ ಸ್ಥಾಪಿಸಲಾಗಿರುವ ಕೊಳಗಳಲ್ಲಿ ಸುರಿಯಲಾಗುತ್ತದೆ.

ಇವುಗಳಲ್ಲಿ ತಮ್ಮ ಧಾರ್ಮಿಕ ನಂಬಿಕೆಗಳಿಗೆ ಅನುಗುಣವಾಗಿ ಆಸಕ್ತ ಕೈದಿಗಳಿಗೆ ಪವಿತ್ರ ಸ್ನಾನ ಕೈಗೊಳ್ಳಲು ಅವಕಾಶ ನೀಡಲಾಗಿದೆ. ಈ ಉಪಕ್ರಮ ಕೈದಿಗಳು ಬಂಧನದಲ್ಲಿದ್ದರೂ ತಮ್ಮ ಧಾರ್ಮಿಕ ಮತ್ತು ಸಾಂಸ್ಕೃತಿಕ ನಂಬಿಕೆಗಳನ್ನು ಪಾಲನೆ ಮಾಡಲು ಅವಕಾಶ ಒದಗಿಸುತ್ತದೆ. ರಾಜ್ಯದ ಎಲ್ಲಾ ಜೈಲುಗಳಲ್ಲಿ ಸುಮಾರು ೯೦ ಸಾವಿರ ಕೈದಿಗಳಿದ್ದಾರೆ ಎಂದು ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ.

ಧ್ವನಿ – ಆದರ್ಶ್

***************

ದುಬೈ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಐಸಿಸಿ ಚಾಂಪಿಯನ್ಸ್ ಟ್ರೋಫಿ ಏಕದಿನ ಕ್ರಿಕೆಟ್ ಪಂದ್ಯಾವಳಿಯ 'ಎ' ಗುಂಪಿನ ತನ್ನ ಮೊದಲ ಪಂದ್ಯದಲ್ಲಿ ಭಾರತ, ಬಾಂಗ್ಲಾದೇಶದ ವಿರುದ್ಧ ೬ ವಿಕೆಟ್‌ಗಳ ಗೆಲುವು ಸಾಧಿಸಿದೆ.

ಟಾಸ್ ಗೆದ್ದು ಮೊದಲು ಬ್ಯಾಟ್ ಮಾಡಿದ ಬಾಂಗ್ಲಾದೇಶ, ೪೯.೪ ಓವರ್‌ಗಳಲ್ಲಿ ತನ್ನೆಲ್ಲಾ ವಿಕೆಟ್ ಕಳೆದುಕೊಂಡು ೨೨೮ ರನ್ ಗಳಿಸಿತು. ಬಾಂಗ್ಲಾದೇಶದ ಪರ ತೌಹಿದ್ ಹ್ರಿದೊಯ್ ಶತಕ ಗಳಿಸಿದರೆ, ಜಾಕರ್ ಅಲಿ ೬೮ ರನ್ ಗಳಿಸಿದರು. ಬಾರತದ ಪರ ಮೊಹಮ್ಮದ್ ಶಮಿ ೫, ಹರ್ಷಿತ್ ರಾಣಾ ೩ ಹಾಗೂ ಅಕ್ಸರ್ ಪಟೇಲ್ ೨ ವಿಕೆಟ್ ಪಡೆದರು.

೨೨೯ ರನ್ ಗಳ ಗುರಿ ಬೆನ್ನತ್ತಿದ ಭಾರತ, ೪೬.೩ ಓವರ್‌ಗಳಲ್ಲಿ ೪ ವಿಕೆಟ್ ನಷ್ಟಕ್ಕೆ ೨೩೧ ರನ್ ಗಳಿಸಿ ಗೆಲುವು ತನ್ನದಾಗಿಸಿಕೊಂಡಿತು.

ಭಾರತದ ಪರ, ಶುಭಮನ್ ಗಿಲ್ ಶತಕ, ರೋಹಿತ್ ಶರ್ಮಾ ಹಾಗೂ ಕೆ.ಎಲ್.ರಾಹುಲ್ ತಲಾ ೪೧ ರನ್ ಗಳಿಸುವ ಮೂಲಕ ತಂಡದ ಗೆಲುವಿನಲ್ಲಿ ಪ್ರಮುಖ ಪಾತ್ರವಹಿಸಿದರು. ತಮ್ಮ ಅತ್ಯುತ್ತಮ ಪ್ರದರ್ಶನಕ್ಕಾಗಿ ಶುಭಮನ್ ಗಿಲ್ ಪಂದ್ಯಶ್ರೇಷ್ಠ ಪ್ರಶಸ್ತಿ ಪಡೆದರು.

ಇಂದು ಪಾಕಿಸ್ತಾನದ ಕರಾಚಿಯ ರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆಯಲಿರುವ ಬಿ ಗುಂಪಿನ ಪಂದ್ಯದಲ್ಲಿ ಅಫ್ಘಾನಿಸ್ತಾನ ಹಾಗೂ ದಕ್ಷಿಣ ಆಫ್ರಿಕಾ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಭಾರತೀಯ ಕಾಲಮಾನ ಅಪರಾಹ್ನ ೨.೩೦ಕ್ಕೆ ಆರಂಭವಾಗಲಿದೆ.

***************

ಮಹಿಳೆಯರ ಪ್ರೀಮಿಯರ್ ಲೀಗ್ ಕ್ರಿಕೆಟ್ ಪಂದ್ಯಾವಳಿಯಲ್ಲಿ ಇಂದು ಬೆಂಗಳೂರಿನ ಎನ್.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಮುಂಬೈ ಇಂಡಿಯನ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

*******ಮುಕ್ತಾಯ*******